ಬ-72
46

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ-72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

**ವಿಷಯ:-**

ಸರ್ಕಾರಿ ಅನುದಾನಿತ ಹಾಗೂ ಅನುದಾನರಹಿತ ಶಾಲಾ ಕಾಲೇಜುಗಳ ನೌಕರರಿಗೆ ವೇತನವನ್ನು ಹೊರತುಪಡಿಸಿ, ಬೇರೆ ಯಾವುದೇ ಆದಾಯವಿರುವುದಿಲ್ಲ. ಇತ್ತೀಚಿನ ದಿನಗಳಲ್ಲಿ ಹಲವಾರು ಶಿಕ್ಷಕರು ಅನೇಕ ಖಾಯಿಲೆಗಳಿಂದ ಬಳಲುತ್ತಿದ್ದು ಆರ್ಥಿಕವಾಗಿ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಆದ್ದರಿಂದ ಸರ್ಕಾರಿ ಅನುದಾನಿತ ಹಾಗೂ ಅನುದಾನರಹಿತ ಶಾಲಾ ಕಾಲೇಜುಗಳ ಎಲ್ಲಾ ನೌಕರರಿಗೂ ಅನ್ವಯವಾಗುವಂತೆ ಒಂದು ವೈದ್ಯಕೀಯ ವಿಮಾ ಯೋಜನೆಯನ್ನು ಜಾರಿಗೆ ತರಬೇಕೆಂಬ ವಿಷಯದ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಸರ್ಕಾರಿ ಅನುದಾನಿತ ಹಾಗೂ ಅನುದಾನರಹಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescription of Curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ.

ಸರ್ಕಾರಿ ಅನುದಾನಿತ ಹಾಗೂ ಅನುದಾನರಹಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡುವುದಿಲ್ಲ, ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ. ಈ ಹಿನ್ನೆಲೆಯಲ್ಲಿ ವೈದ್ಯಕೀಯ ವಿಮಾ ಯೋಜನೆಯ ಅನುಷ್ಠಾನದ ಪ್ರಶ್ನೆ ಉದ್ಭವಿಸುವುದಿಲ್ಲ.

ಸಂಖ್ಯೆ : ಇಪಿ 67 ಎಸ್‌ಇಎಸ್ 2020

(ಎಸ್.ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು